ತಂತಿ ವಿಳಾಸ: ಯೂನಿರಿಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/152/2022-23

ದಿನಾಂಕ:31.08.2024

## ಸುತ್ತೋಲೆ

ವಿಷಯ: ದಿನಾಂಕ: 05.09.2024ರಂದು "ಶಿಕ್ಷಕರ ದಿನಾಚರಣೆ" ಕಾರ್ಯಕ್ರಮಕ್ಕೆ ಭಾಗವಹಿಸುವ ಬಗ್ಗೆ
ಉಲ್ಲೇಖ: ಮಾನ್ಯ ಕುಲಪತಿಯವರ ಟಿಪ್ಪಣಿ ದಿನಾಂಕ:30.08.2024.

-:-

ವಿಶ್ವವಿದ್ಯಾನಿಲಯದ ವತಿಯಿಂದ ದಿನಾಂಕ 05-09-2024 ರಂದು ಬೆಳಗ್ಗೆ 11.00 ಗಂಟೆಗೆ ವಿಜ್ಞಾನ ಭವನದ ಸಭಾಂಗಣದಲ್ಲಿ "ಶಿಕ್ಷಕರ ದಿನಾಚರಣೆ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಭಾರತ ದೇಶದ ರಾಷ್ಟ್ರೀಯ ರಾಜಧಾನಿ ದೆಹಲಿ ಪ್ರದೇಶದ ಲೆಫ್ಟಿನೆಂಟ್ ಗವರ್ನರ್‌ಗೆ ಗೌರವ ಸಲಹೆಗಾರರಾದ ಡಾ. ಸುದರ್ಶನ ರಾಮರಾಜು, ಇವರು ಶಿಕ್ಷಕರ ದಿನಾಚರಣೆ ಪ್ರಯುಕ್ತ "Learnings from Life-Journeys of a fellow Mysorean" ಕುರಿತು ವಿಶೇಷ ಉಪನ್ಯಾಸ ನೀಡುವರು ಹಾಗೂ ಸದರಿ ಸಮಾರಂಭದ ಅಧ್ಯಕ್ಷತೆಯನ್ನು ಪ್ರೊ. ಎನ್.ಕೆ. ಲೋಕನಾಥ್, ಕುಲಪತಿಗಳು ವಹಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕೊತ್ತರ ಅಧ್ಯಯನ ವಿಭಾಗಗಳ ಅಧ್ಯಾಪಕರುಗಳು/ಅತಿಥಿ ಉಪನ್ಯಾಸಕರು/ಸಂಶೋಧಕರು ದಿನಾಂಕ:05.09.2024ರಂದು ಬೆಳಗ್ಗೆ 10.30 ಗಂಟೆಗೆ ವಿಜ್ಞಾನ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಆಸೀನರಾಗಲು ತಿಳಿಸಲಾಗಿದೆ.

ಸದರಿ ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ತೆರಳುವುದು.

ಕುಲಸಚಿವ

ಗೆ,

1. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಕಾರ್ಯಪಾಲಕ ಅಭಿಯಂತರರು, ತಾಂತ್ರಿಕ ವಿಭಾಗ, ಮೈ.ವಿ.ವಿ.ನಿಲಯ, ಮೈಸೂರು.
5. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
7. ಎಲ್ಲಾ ಸ್ನಾತಕೊತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ ಸಂಯೋಜನಾಧಿಕಾರಿಗಳು ಮತ್ತು ಅಧ್ಯಾಪಕರು.
8. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
9. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈ.ವಿ.ವಿ.ನಿಲಯ, ಮೈಸೂರು.
10. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
11. ಸಂಯೋಜಕರು, ಐ.ಸಿ.ಡಿ., ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
12. ಸಂಯೋಜಕರು ಐ.ಓ.ಇ.-ಸದರಿ ದಿನದಂದು ಸಭಾಂಗಣದಲ್ಲಿ ಆಸನ ವ್ಯವಸ್ಥೆ, ಸ್ವಚ್ಚತೆ ಮುಂತಾದ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಕೋರಿದೆ.
13. ಸಹಾಯಕ ನಿರ್ದೇಶಕರು, ತೋಟಗಾರಿಕೆ ವಿಭಾಗ, ಮಾ.ಗಂ., ಮೈಸೂರು-ಸೂಕ್ತ ಕ್ರಮಕ್ಕಾಗಿ.
14. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
15. ಕಛೇರಿ ಪ್ರತಿ.

(ಕ್ರಮ ಸಂಖ್ಯೆ 6–11ಕ್ಕೆ:) ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು/ ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ. ಹಾಗೂ ಈ ಕಾರ್ಯಕ್ರಮವು ಶಿಕ್ಷಕರ ಗೌರವದ ಸಂಕೇತವಾಗಿರುವುದರಿಂದ ಎಲ್ಲರೂ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವಂತೆ ಕೋರಿದೆ.

Scanned with OKEN Scanner